# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ರಾಜ್ಯದಲ್ಲಿ ಸ್ವಯಂ ಸೇವಾ ಸಂಸ್ಥೆಗಳಿಂದ 14 ಜಿಲ್ಲೆಗಳಲ್ಲಿ ನಡೆಯುತ್ತಿರುವ ಹಿರಿಯ ನಾಗರಿಕರ ಸಹಾಯವಾಣಿ ಕೇಂದ್ರಗಳ ಅನುದಾನವನ್ನು ನಿರಂತರವಾಗಿ ಮುಂದುವರಿಸುವ ಬಗ್ಗೆ.

ಓದಲಾಗಿದೆ:
1) ಸರ್ಕಾರದ ಆದೇಶ ಸಂಖ್ಯೆ: ಮಮಅ/265/ಎಸ್‌ಜೆಡಿ/2004, ದಿನಾಂಕ:29-09-1995
2) ಸರ್ಕಾರದ ಆದೇಶ ಸಂಖ್ಯೆ: ಮಮಇ/213/ಪಿಹೆಚ್‌ಪಿ/2009, ದಿನಾಂಕ:19-03-2010
3) ಸರ್ಕಾರದ ಆದೇಶ ಸಂಖ್ಯೆ: ಮಮಇ/28/ಪಿಹೆಚ್‌ಪಿ/2011, ದಿನಾಂಕ:30-10-2011 ಮತ್ತು 23-11-2011
4) ಸರ್ಕಾರದ ಆದೇಶ ಸಂಖ್ಯೆ: ಮಮಇ/167/ಪಿಹೆಚ್‌ಪಿ/2013, ದಿನಾಂಕ:20-3-2013
5) ಸರ್ಕಾರದ ಆದೇಶ ಸಂಖ್ಯೆ: ಮಮಇ/270/ಪಿಹೆಚ್‌ಪಿ/2013, ದಿನಾಂಕ:28-8-2013
6) ನಿರ್ದೇಶಕರು, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಬೆಂಗಳೂರು ಇವರ ಅರೆ ಸರ್ಕಾರಿ ಪತ್ರ ಸಂಖ್ಯೆ: ವಿಹಿನಾಸಇ/ಹಿನಾವಿ.ಹಿ.3/ಎಂ.ಐ.ಎಸ್/ತಂ.ಮಾ/32/13-14/1420, ದಿನಾಂಕ:08-07-2014. ಮತ್ತು ಪತ್ರ ಸಂಖ್ಯೆ: ವಿಹಿನಾಸಇ/ಹಿನಾವಿ.ಸಿ.2/ಹಿ.ನಾ.ಸ/127/ನಿ.ಮು.ಮಂ/2013-14/1669, ದಿನಾಂಕ:24-07-2014.

ಪ್ರಸ್ತಾವನೆ:

ರಾಜ್ಯದಲ್ಲಿ ಸ್ವಯಂ ಸೇವಾ ಸಂಸ್ಥೆಗಳ ಮೂಲಕ ಹಿರಿಯ ನಾಗರಿಕರ ಸಹಾಯವಾಣಿ ಕೇಂದ್ರಗಳನ್ನು ಪ್ರಾರಂಭಿಸಲು ದಿನಾಂಕ: 29-09-1995ರ ಕ್ರ.ಸಂ.(1)ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಕೆಲವೊಂದು ಮಾರ್ಗಸೂಚಿ/ಷರತ್ತುಗಳನ್ನು ವಿಧಿಸಿ ಮಂಜೂರಾತಿ ನೀಡಲಾಗಿದೆ. ಈ ಸಹಾಯವಾಣಿ ಕೇಂದ್ರಗಳಿಗೆ ನೀಡಲಾಗುವ ಅನುದಾನವನ್ನು ದಿನಾಂಕ:28-08-2013ರ ಕ್ರ.ಸಂ.(5)ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಈ ಯೋಜನೆಯನ್ನು 15 ಜಿಲ್ಲೆಗಳಿಗೆ ವಿಸ್ತರಿಸಿದೆ. ಬೆಂಗಳೂರು ನಗರ, ಬೆಳಗಾವಿ, ಧಾರವಾಡ, ಗುಲ್ಬರ್ಗ ಮತ್ತು ದಕ್ಷಿಣ ಕನ್ನಡ ಜಿಲ್ಲೆಗಳಲ್ಲಿನ ಹಿರಿಯ ನಾಗರಿಕರ ಸಹಾಯವಾಣಿ ಕೇಂದ್ರಗಳನ್ನು 2009-10ನೇ ಸಾಲಿಗೆ ಹಾಗೂ ಬೆಂಗಳೂರು ನಗರ, ಬೆಳಗಾವಿ, ಧಾರವಾಡ, ಗುಲ್ಬರ್ಗ, ಮೈಸೂರು ಮತ್ತು ದಕ್ಷಿಣ ಕನ್ನಡ ಜಿಲ್ಲೆಗಳಲ್ಲಿನ ಸಹಾಯವಾಣಿ ಕೇಂದ್ರಗಳಿಗೆ 2010-11 ಮತ್ತು 2011-12ನೇ ಸಾಲಿಗೆ ಹಾಗೂ ಬೆಂಗಳೂರು ನಗರ, ಬೆಳಗಾವಿ, ಧಾರವಾಡ, ಗುಲ್ಬರ್ಗ, ಮೈಸೂರು, ದಕ್ಷಿಣ ಕನ್ನಡ, ಬಳ್ಳಾರಿ, ಶಿವಮೊಗ್ಗ, ದಾವಣಗೆರೆ, ರಾಯಚೂರು ಮತ್ತು ಕೋಲಾರ ಜಿಲ್ಲೆಗಳಲ್ಲಿನ ಹಿರಿಯ ನಾಗರಿಕರ ಸಹಾಯವಾಣಿ ಕೇಂದ್ರಗಳನ್ನು ಕ್ರ.ಸಂ.(2), (3) ಮತ್ತು (4)ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಮುಂದುವರೆಸಿ ಆದೇಶಿಸಿದೆ.

ನಿರ್ದೇಶಕರು, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರು ಮೇಲೆ ಕ್ರ.ಸಂ.(6)ರಲ್ಲಿ ಓದಲಾದ ದಿನಾಂಕ:8-7-2014 ಮತ್ತು ದಿನಾಂಕ: 24-7-2014ರ ಪತ್ರಗಳಲ್ಲಿ, ರಾಜ್ಯದ 14 ಸಹಾಯವಾಣಿ ಕೇಂದ್ರಗಳು ಈಗಾಗಲೇ 2004ರಿಂದ 2013-14ರ ವರೆಗೆ ನಿರಂತರವಾಗಿ ಕಾರ್ಯಚಟುವಟಿಕೆ ನಿರ್ವಹಿಸಿದ್ದು, ಈ ಸಂಸ್ಥೆಗಳನ್ನು ನಿರಂತರವಾಗಿ ಮುಂದುವರೆಸುವಂತೆ ಕೋರಿರುತ್ತಾರೆ.

ಮೇಲಿನ ಎಲ್ಲಾ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

4/09/14

## ಸರ್ಕಾರದ ಆದೇಶ ಸಂಖ್ಯೆ: ಮಮಇ 285 ಪಿಹೆಚ್‌ಪಿ 2014, ಬೆಂಗಳೂರು ದಿನಾಂಕ: 30 -8-2014

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ ಹಾಗೂ ಹಿರಿಯ ನಾಗರಿಕರ ಹಿತದೃಷ್ಟಿಯಿಂದ, ರಾಜ್ಯದಲ್ಲಿ ಸ್ವಯಂಸೇವಾ ಸಂಸ್ಥೆಗಳ ವತಿಯಿಂದ ಕಾರ್ಯನಿರ್ವಹಿಸುತ್ತಿರುವ ಈ ಆದೇಶವನ್ನು ಲಗತ್ತಿಸಿರುವ ಅನುಬಂಧದಲ್ಲಿನ 14 ಹಿರಿಯ ನಾಗರಿಕರ ಸಹಾಯವಾಣಿ ಕೇಂದ್ರಗಳಿಗೆ 5 ವರ್ಷಗಳ ನಂತರ ಅನುದಾನವನ್ನು ನಿರಂತರವಾಗಿ ಮುಂದುವರೆಸಲು ಆದೇಶಿಸಿದೆ.

ಈ ಯೋಜನೆಗೆ ಸಂಬಂಧಿಸಿದ ಸರ್ಕಾರದ ಮಾರ್ಗಸೂಚಿಗಳನ್ನು ಮತ್ತು ಕಾಲಕಾಲಕ್ಕೆ ಹೊರಡಿಸುವ ಸುತ್ತೋಲೆ/ಆದೇಶಗಳನ್ನು ಉಲ್ಲಂಘಿಸಿದಲ್ಲಿ ಅಂತಹ ಸಂಸ್ಥೆಗಳನ್ನು ರದ್ದುಗೊಳಿಸಲಾಗುವುದು.

ಈ ಸಂಸ್ಥೆಗಳ 2013-14ನೇ ಸಾಲಿನ ಆಡಿಟ್ ವರದಿ ಮತ್ತು 2014-15ನೇ ಸಾಲಿನ ನೋಂದಣಿ ನವೀಕರಣ ಪತ್ರವನ್ನು ಆಯಾ ಜಿಲ್ಲೆಯ ಜಿಹಾಗಡೆ ಮಾಹಿತಿಯನ್ನು ... ದಲ್ಲಿ ಪಡೆಯತಕ್ಕದ್ದು.

ಸಂಖ್ಯೆ 811
ದಿನಾಂಕ 4/9/14

ಇದಕ್ಕೆ ತಗಲುವ ವೆಚ್ಚವನ್ನು ಲೆಕ್ಕ ಶೀರ್ಷಿಕೆ 2235-02-104-2-04(ಯೋಜನೆ)ಅಡಿಯಲ್ಲಿ 2014-15ನೇ ಸಾಲಿನಲ್ಲಿ ಒದಗಿಸಿರುವ ಅನುದಾನದಿಂದ ಭರಿಸತಕ್ಕದ್ದು.

ಈ ಆದೇಶವನ್ನು ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ 1 ಟಿಎಫ್‌ಪಿ 1996, ದಿನಾಂಕ:10-7-1996 ರಲ್ಲಿ ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿರವರಿಗೆ ಪ್ರತ್ಯಾಯೋಜಿಸಿರುವ ಅಧಿಕಾರದ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಗೋಪಾಲ್) 30/8/14
ಸರ್ಕಾರದ ಉಪ ಕಾರ್ಯದರ್ಶಿ,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ
ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ

ಇವರಿಗೆ:

1) ಮಹಾಲೇಖಪಾಲರು (ಲೆಕ್ಕ ಪರಿಶೋಧನೆ ಮತ್ತು ಲೆಕ್ಕಪತ್ರ), ಕರ್ನಾಟಕ, ಬೆಂಗಳೂರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
3) ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
4) ಎಲ್ಲಾ ಜಿಲ್ಲಾಧಿಕಾರಿಗಳು (ನಿರ್ದೇಶಕರ ಮುಖಾಂತರ).
5) ನಿರ್ದೇಶಕರು, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಬೆಂಗಳೂರು.
6) ಎಲ್ಲಾ ಉಪನಿರ್ದೇಶಕರು/ ಜಿಲ್ಲಾ ಅಂಗವಿಕಲ ಕಲ್ಯಾಣಾಧಿಕಾರಿಗಳು (ನಿರ್ದೇಶಕರ ಮುಖಾಂತರ).
7) ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ(ವೆಚ್ಚ-3), ವಿಧಾನಸೌಧ, ಬೆಂಗಳೂರು.
8) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
9) ಸರ್ಕಾರದ ಪ್ರಧಾನ ಕಾರ್ಯದರ್ಶಿರವರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
10) ಸರ್ಕಾರದ ಉಪ ಕಾರ್ಯದರ್ಶಿರವರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರ ಆಪ್ತ ಸಹಾಯಕ, ಬಹುಮಹಡಿಗಳ ಕಟ್ಟಡ, ಬೆಂಗಳೂರು
11) ಸಂಬಂಧಿಸಿದ ಸಂಸ್ಥೆಗಳಿಗೆ (ನಿರ್ದೇಶಕರ ಮುಖಾಂತರ).
12) ಶಾಖಾ ರಕ್ಷಾ ಕಡತ/ಒ.ಡಿ.ಜಿ.ಸಿ/ಹೆಚ್ಚುವರಿ ಪ್ರತಿಗಳು.

**ಸರ್ಕಾರದ ಆದೇಶ ಸಂಖ್ಯೆ: ಮಮಇ 285 ಪಿಹೆಚ್‌ಪಿ 2014, ಬೆಂಗಳೂರು ದಿನಾಂಕ: 30-08-2014 ಕ್ಕೆ ಅನುಬಂಧ**

| ಕ್ರ ಸಂ. | ಜಿಲ್ಲೆಯ ಹೆಸರು | ಸ್ವಯಂ ಸೇವಾ ಸಂಸ್ಥೆಯ ಹೆಸರು |
|---|---|---|
| 1 | ಶಿವಮೊಗ್ಗ | ಲಲಿತ ಅಕಾಡೆಮಿ, ಶಿವಮೊಗ್ಗ, ಹಿರಿಯ ನಾಗರಿಕರ ಸಹಾಯವಾಣಿ ಕೇಂದ್ರ, ಶಿವಮೊಗ್ಗ |
| 2 | ಮೈಸೂರು | ಜೆ.ಎಸ್.ಎಸ್ ಮೆಡಿಕಲ್ ಟ್ರಸ್ಟ್, ಮೈಸೂರು, ಜೆ.ಎಸ್.ಎಸ್ ಹಿರಿಯ ನಾಗರಿಕರ ಸಹಾಯವಾಣಿ ಕೇಂದ್ರ, ಮೈಸೂರು |
| 3 | ಧಾರವಾಡ | ವಿಶ್ವಧರ್ಮ ಮಹಿಳಾ ಮತ್ತು ಮಕ್ಕಳ ಶಿಕ್ಷಣ ಸೇವಾಶ್ರಮ ಸಮಿತಿ, ಹುಬ್ಬಳ್ಳಿ ಹಿರಿಯ ನಾಗರಿಕರ ಸಹಾಯವಾಣಿ, ಉಪನಗರ, ಪೊಲೀಸ್ ಠಾಣೆ, ಹುಬ್ಬಳ್ಳಿ |
| 4 | ದಕ್ಷಿಣ ಕನ್ನಡ | ವಿಶ್ವಾಸ್ ಟ್ರಸ್ಟ್, ವಲೆನ್ಷಿಯಾ ಚರ್ಚ್ ರಸ್ತೆ, ಕಂಕನಾಡಿ, 4ನೇ ಕ್ರಾಸ್, ಮಂಗಳೂರು, ಹಿರಿಯ ನಾಗರಿಕರ ಸಹಾಯವಾಣಿ ಕೇಂದ್ರ, ಪಾಂಡೇಶ್ವರ, ಪೊಲೀಸ್ ಠಾಣೆ, ಮಂಗಳೂರು |
| 5 | ಗುಲ್ಬರ್ಗಾ | ಶಿವರುದ್ರ ಟ್ರಸ್ಟ್ (ರಿ), ಶರಣ ನಗರ, ಗುಲ್ಬರ್ಗಾ, ಹಿರಿಯ ನಾಗರಿಕರ ಸಹಾಯವಾಣಿ, ಲಕ್ಷ್ಮೀ ನಾರಾಯಣ ಕಾಂಪ್ಲೆಕ್ಸ್, ಸರಸ್ವತಿ ಗೋದಾಮು, ಗುಲ್ಬರ್ಗಾ |
| 6 | ಬಳ್ಳಾರಿ | ಸಮಗ್ರ ಸಾಮಾಜಿಕ ಹಾಗೂ ನೈತಿಕ ಅಭಿವೃದ್ಧಿ (ಸ್ಮೈಲ್) ಸಂಸ್ಥೆ, ಬಳ್ಳಾರಿ, ಹಿರಿಯ ನಾಗರಿಕರ ಸಹಾಯವಾಣಿ ಕೇಂದ್ರ, ಗಾಂಧಿನಗರ, ಪೊಲೀಸ್ ಠಾಣೆ ಆವರಣ, ಬಳ್ಳಾರಿ |
| 7 | ಬೆಂಗಳೂರು ನಗರ | ನೈಟಿಂಗಲ್ ಮೆಡಿಕಲ್ ಟ್ರಸ್ಟ್ (ರಿ), ನಂ.337, 2ನೇ ಕ್ರಾಸ್, 1ನೇ ಬ್ಲಾಕ್, ಆರ್.ಟಿ.ನಗರ, ಬೆಂಗಳೂರು ನಗರ, ಹಿರಿಯ ನಾಗರಿಕರ ಸಹಾಯವಾಣಿ ಕೇಂದ್ರ, ಶಿವಾಜಿನಗರ, ಬಸ್ ಸ್ಟಾಂಡ್, 2ನೇ ಮಹಡಿ, ಬೆಂಗಳೂರು |
| 8 | ದಾವಣಗೆರೆ | ಗಾಯಿತ್ರಿ ಗ್ರಾಮೀಣ ವಿದ್ಯಾಸಂಸ್ಥೆ (ರಿ), ಮಾಯಕೊಂಡ, ದಾವಣಗೆರೆ ಜಿಲ್ಲೆ<br>ಹಿರಿಯ ನಾಗರಿಕರ ಸಹಾಯ ವಾಣಿ ಕೇಂದ್ರ, ಜಿಲ್ಲಾ ಪೊಲೀಸ್ ಠಾಣೆ ಆವರಣ, ಪಿ.ಬಿ.ರಸ್ತೆ, ದಾವಣಗೆರೆ |
| 09 | ಬೆಳಗಾವಿ | ರಾಮಲಿಂಗೇಶ್ವರ ಗ್ರಾಮೀಣಾಭಿವೃದ್ಧಿ ಸಂಘ, ಉಡಿಕೇರಿ, ಬೆಳವಡಿ, ಬೈಲಹೊಂಗಲ ತಾ: ಬೆಳಗಾವಿ ಜಿಲ್ಲೆ |
| 10 | ಕೋಲಾರ | ದಿವ್ಯಜ್ಯೋತಿ ಎಜುಕೇಷನಲ್ ಅಂಡ್ ಕಲ್ಚರಲ್ ಸೊಸೈಟಿ (ರಿ), ಅರಿಕುಂಟೆ ಹಳ್ಳಿ, ಶ್ರೀನಿವಾಪುರ ಕೋಲಾರ ಜಿಲ್ಲೆ |
| 11 | ವಿಜಾಪುರ | ಮುಧೋಳ ಶ್ರೀ ಶಿವಯೋಗಿ ಶಿವಲಿಂಗೇಶ್ವರ ಶಿಕ್ಷಣ ಸಂಸ್ಥೆಯ ವತಿಯಿಂದ ಬಾಲ್ಕಿಯ ವಿಜಾಪುರ ಜಿಲ್ಲೆಯಲ್ಲಿ ನಡೆಸುತ್ತಿರುವ ಹಿರಿಯ ನಾಗರಿಕರ ಸಹಾಯವಾಣಿ ಕೇಂದ್ರ |
| 12 | ಬಾಗಲಕೋಟೆ | ಶ್ರೀ ಕನಕದಾಸ ಗ್ರಾಮೀಣ ಅಭಿವೃದ್ಧಿ ಸಂಸ್ಥೆ, ತಗ್ಗಿ, ಬೀಳಗಿ ತಾಲ್ಲೂಕ್, ಬಾಗಲಕೋಟೆ |
| 13 | ಬೀದರ್ | ಡಾ: ಬಿ.ಆರ್.ಅಂಬೇಡ್ಕರ್ ಕಲ್ಚರಲ್ ಅಂಡ್ ವೆಲ್ಫೇರ್ ಸೊಸೈಟಿ, ಬೀದರ್ |
| 14 | ತುಮಕೂರು | ಶ್ರೀ ರಾಮು ಫೌಂಡೇಷನ್ ಫಾರ್ ರೂರಲ್ ಆರ್ಗನೈಸೇಷನ್, ನಂ.1616, 3ನೇ ಕ್ರಾಸ್, ಬಿ.ಜಿ.ರಸ್ತೆ, ತುಮಕೂರು |

(ಗೋಪಾಲ್) 30/8/14

ಸರ್ಕಾರದ ಉಪ ಕಾರ್ಯದರ್ಶಿ,

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ

ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ.